## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: 2011-12ನೇ ಸಾಲಿನಲ್ಲಿ ಕಿತ್ತೂರು ಉತ್ಸವ ಆಚರಿಸಲು ಅನುದಾನ ಬಿಡುಗಡೆ ಕುರಿತು

ಓದಲಾಗಿದೆ: ಆಯುಕ್ತರು, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಬೆಂಗಳೂರು ರವರ ಪತ್ರ ಸಂಖ್ಯೆ: ಕಸನಿ:5:ಕಿ:ಉ:2011-12 ದಿನಾಂಕ 19.9.2011

**ಪ್ರಸ್ತಾವನೆ:**

2011ನೇ ಅಕ್ಟೋಬರ್ 23. 24 ಮತ್ತು 25ರಂದು ಬೆಳಗಾವಿ ಜಿಲ್ಲೆಯ ಕಿತ್ತೂರಿನಲ್ಲಿ ಕಿತ್ತೂರು ಉತ್ಸವವನ್ನು ಆಚರಿಸಲು ಒಂದು ಕೋಟಿ ರೂಪಾಯಿ ಅನುದಾನ ಬಿಡುಗಡೆ ಮಾಡಬೇಕಾಗಿ ಆಯುಕ್ತರು, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ರವರು ಓದಲಾದ ಪತ್ರದಲ್ಲಿ ಸರ್ಕಾರವನ್ನು ಕೋರಿರುತ್ತಾರೆ. ಇದನ್ನು ಪರಿಶೀಲಿಸಿ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರಿ ಆದೇಶ ಸಂಖ್ಯೆ: ಕಸಂವಾಪ್ರ 1010 ಕಸಧ 2011**
**ಬೆಂಗಳೂರು, ದಿನಾಂಕ: 07-10-2011**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ 2011ನೇ ಅಕ್ಟೋಬರ್ 23. 24 ಮತ್ತು 25ರಂದು ಬೆಳಗಾವಿ ಜಿಲ್ಲೆಯ ಕಿತ್ತೂರಿನಲ್ಲಿ ಕಿತ್ತೂರು ಉತ್ಸವವನ್ನು ಆಚರಿಸಲು ರೂ.80.00,000/- (ಎಂಭತ್ತು ಲಕ್ಷ ರೂಪಾಯಿ ಮಾತ್ರ) ಗಳನ್ನು ಜಿಲ್ಲಾಧಿಕಾರಿಗಳು, ಬೆಳಗಾವಿ ಜಿಲ್ಲೆ ರವರಿಗೆ ಕೆಳಕಂಡ ಷರತ್ತಿಗೆ ಒಳಪಟ್ಟು ಬಿಡುಗಡೆ ಮಾಡಲು ಆಯುಕ್ತರು, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಬೆಂಗಳೂರು ರವರಿಗೆ ಸರ್ಕಾರದ ಮಂಜೂರಾತಿ ನೀಡಲಾಗಿದೆ.

:: ಷರತ್ತುಗಳು ::

1) ಬಿಡುಗಡೆ ಮಾಡಲಾದ ಅನುದಾನವನ್ನು ಉದ್ದೇಶಿತ ಕಾರ್ಯಕ್ಕೆ ಮಾತ್ರ ಬಳಸತಕ್ಕದ್ದು.
2) ಅನುದಾನ ಸಮರ್ಪಕವಾಗಿ ಬಳಕೆ ಮಾಡಿರುವ ಬಗ್ಗೆ ಹಣಬಳಕೆ ಪ್ರಮಾಣಪತ್ರ ಸಲ್ಲಿಸತಕ್ಕದ್ದು.
3) ಕರ್ನಾಟಕ ಪಾರದರ್ಶಕ ಕಾಯ್ದೆ ಹಾಗೂ ನಿಯಮಗಳನ್ನು ಕಟ್ಟುನಿಟ್ಟಾಗಿ ಅನುಸರಿಸುವುದು.

ಬಿಡುಗಡೆ ಮಾಡಿರುವ ರೂ.80,00,000/- ಅನುದಾನದಲ್ಲಿ ರೂ.30.00,000/- (ಮೂವತ್ತು ಲಕ್ಷ ರೂಪಾಯಿ ಮಾತ್ರ) ಗಳನ್ನು ಲೆಕ್ಕಶೀರ್ಷಿಕೆ 2205-00-102-4-01-101 (ಯೋಜನೆ) ಅಡಿಯಲ್ಲಿ ಹಾಗೂ ರೂ.50.00.000/- (ಐವತ್ತು ಲಕ್ಷ ರೂಪಾಯಿ ಮಾತ್ರ) ಗಳನ್ನು ಲೆಕ್ಕಶೀರ್ಷಿಕೆ 2205-00-102-4-31-059 (ಯೋಜನೆ) ಅಡಿಯಲ್ಲಿ ಭರಿಸತಕ್ಕದ್ದು.

ಈ ಆದೇಶವನ್ನು ಆರ್ಥಿಕ ಇಲಾಖೆಯು ಇಲಾಖಾ ಕಾರ್ಯದರ್ಶಿಯವರಿಗೆ ಸರ್ಕಾರದ ಆದೇಶ ಸಂಖ್ಯೆ ಎಫ್‌ಡಿ 1 ಟಿಎಫ್‌ಪಿ 2008 ದಿನಾಂಕ 16.05.2008ರಲ್ಲಿ ಪ್ರದತ್ತಗೊಳಿಸಲಾದ ಅಧಿಕಾರದ ಪ್ರತ್ಯಾಯೋಜನೆಯನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಹೆಚ್.ವಿ.ರಾಮಚಂದ್ರರಾವ್)
ಸರ್ಕಾರದ ಅಧೀನ ಕಾರ್ಯದರ್ಶಿ,
ಕನ್ನಡ ಮತ್ತು ಸಂಸ್ಕೃತಿ, ವಾರ್ತಾ ಇಲಾಖೆ
(ಸಂಸ್ಕೃತಿ)

ಗೆ:

1. ಮಹಾಲೇಖಪಾಲರು (ಎ&ಇ) ಕರ್ನಾಟಕ, ಬೆಂಗಳೂರು
2. ಜಿಲ್ಲಾಧಿಕಾರಿಗಳು, ಬೆಳಗಾವಿ ಜಿಲ್ಲೆ, ಬೆಳಗಾವಿ
3. ಆಯುಕ್ತರು, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಬೆಂಗಳೂರು
4. ಜಂಟಿ ನಿರ್ದೇಶಕರು, ಹುಜೂರ್ ಖಜಾನೆ, ಬೆಂಗಳೂರು
5. ಜಿಲ್ಲಾ ಖಜಾನಾಧಿಕಾರಿ, ಬೆಳಗಾವಿ ಜಿಲ್ಲೆ, ಬೆಳಗಾವಿ
6. ಸರ್ಕಾರದ ಕಾರ್ಯದರ್ಶಿ/ಉಪಕಾರ್ಯದರ್ಶಿ, ಕನ್ನಡ ಮತ್ತು ಸಂಸ್ಕೃತಿ, ವಾರ್ತಾ [illegible]
7. ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು/ಪತ್ರಾಗಾರ ಇಲಾಖೆ